ಪ್ರಧಾನ ಸಿ.ಜೆ. ಮತ್ತು ಜೆ ಎಂಎಫ್‌ಸಿ ನ್ಯಾಯಾಲಯ, ಮದ್ದೂರು

ಸಾಕ್ಷಿಯ ಹೆಸರು :- ಸುದೀಪ್

ತಂದೆ/ಗಂಡನ ಹೆಸರು :- ರಾಜು

ವಯಸ್ಸು :- 23 ವರ್ಷ

ಉದ್ಯೋಗ :- ಡ್ರೈವರ್

ವಾಸಸ್ಥಳ :- ಬೆಂಗಳೂರು

(ಸಾಕ್ಷಿಗೆ ದಿನಾಂಕಃ 02-04-2026 ರಂದು ಪ್ರಮಾಣ ವಚನ ಬೋಧಿಸಲಾಯಿತು)

ಮುಖ್ಯ ವಿಚಾರಣೆಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ಚಾಸಾ-1 ನನ್ನ ದೊಡ್ಡಪ್ಪನ ಮಗ, ಚಾಸಾ-3 ನನ್ನ ಮಾವ, ಚಾಸಾ-4 ನನ್ನ ಮಾವನ ಬಾಮೈದುನ, ಚಾಸಾ-5 ನನ್ನ ದೊಡ್ಡಪ್ಪ. ಆರೋಪಿತರ ಬಳಿ ನಾವು ಕೆಲಸ ಮಾಡಿದ್ದೇವು. ಆರೋಪಿತರು ಮತ್ತು ನಮ್ಮ ನಡುವೆ ಯಾವುದೇ ಗಲಾಟೆ ಆಗಿರುವುದಿಲ್ಲ. ನಾನು ಹಲ್ಲೆಯ ಹಿನ್ನೆಲೆಯಲ್ಲಿ ಯಾವುದೇ ಚಿಕಿತ್ಸೆ ಪಡೆದುಕೊಂಡಿರುವುದಿಲ್ಲ, ನಾನು ಈ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಮಾನ್ಯ ಸ.ಸ.ಅ. ರವರು ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ , ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಸ.ಸ.ಅ ರವರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

ಪಾಟೀ ಸವಾಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ದಿ 01-03-2022 ನೀವು ಠಾಣೆಗೆ ಹಾಜರಾಗಿ '' ನಾನು ---------- ಗುರುತಿಸುತ್ತೇನೆ'' ಎಂದು ಹೇಳಿಕೆ ನೀಡಿದ್ದೆನೆಂದರೆ ಸರಿಯಲ್ಲ. ಸದರಿ ನಿರಾಕರಣೆಯ ಭಾಗವನ್ನು ಸಂಪೂರ್ಣವಾಗಿ ಸಾಕ್ಷಿಗೆ ಓದಿ ಹೇಳಿದ್ದು ನಿರಾಕರಿಸಿದ ಮೇರೆಗೆ ಸದರಿ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು. ನಿಪಿ-7 ರ ಎಲ್ಲಾ ವಿಚಾರ ನನಗೆ ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯವಾಗಲಿ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ರಾಜೀಯಾಗಿದ್ದೇವೆ ಎನ್ನುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಏನು ಇಲ್ಲವೆಂದು ಹೇಳಿರುತ್ತಾರೆ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಒ

(ಶ್ರೀಮತಿ ನಳಿನ ಎಸ್.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮದ್ದೂರು